

ಶುಭಲಗ್ನ ವಿವಾಹ ವೇದಿಕೆ
ಮೊ: 89513 84653



ಸಂಪಾದಕ: ಕೃಷ್ಣ, ಬನಾರಿ, ಮೊ: 8792128878
e-mail: krishnabanari72@gmail.com

Volume : 4

Issue :139
Pages -2


# ಬಾಲ ಕ್ಷಿತಿಜ


ಸಮಾಜಮುಖೀ ನಿಲುವುಗಳೊಂದಿಗೆ ದೇಶಕಟ್ಟುವ ಹಾದಿಯಲ್ಲಿ

ಬೆಲೆ: 3-00 (ರಿಯಾಯಿತಿ ಬೆಲೆ ರೂ.1) ಪುಟಗಳು - 2

*ಸಂಪುಟ - 4 ಸಂಚಿಕೆ 139*
*25-10-2023 ಬುಧವಾರ*

KARKAN/2004/13105





ಶುಭಲಗ್ನ ವಿವಾಹ ವೇದಿಕೆ
ಮೊ: 89513 84653


### ಜೆಡಿಸ್ ಜಿಲ್ಲಾಧ್ಯಕ್ಷ

## ಎಂ. ಶ್ರೀಕಾಂತ್ ಕಾಂಗ್ರೆಸ್ ಸೇರ್ಪಡೆ

ಶಿವಮೊಗ್ಗ, ಅ.25: ಜೆಡಿಎಸ್ ಜಿಲ್ಲಾಧ್ಯಕ್ಷ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಆಪ್ತರಾಗಿದ್ದ ಎಂ. ಶ್ರೀಕಾಂತ್ ತಮ್ಮ ನೂರಾರು ಬೆಂಬಲಿಗರೊಂದಿಗೆ ಇಂದು ಬೆಂಗಳೂರಿನಲ್ಲಿ ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು.

ಕಳೆದ ಒಂದು ತಿಂಗಳ ಹಿಂದೆಯಷ್ಟೆ ಜೆಡಿಎಸ್ ತೊರೆಯುವ ಬಗ್ಗೆ ಘೋಷಣೆ ಮಾಡಿದ್ದ ಎಂ. ಶ್ರೀಕಾಂತ್ ಅವರು ಇಂದು ಕೆಪಿಸಿಸಿ ಕಚೇರಿಯಲ್ಲಿ ಅಧಿಕೃತವಾಗಿ ಕಾಂಗ್ರೆಸ್ ಸೇರಿದರು.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಶ್ರೀಕಾಂತ್ ಮತ್ತು ಅವರ ಬೆಂಬಲಿಗ ಜೆಡಿಎಸ್ ಮುಖಂಡರುಗಳನ್ನು ಪಕ್ಷಕ್ಕೆ ಬರಮಾಡಿಕೊಂಡರು.

ಶಿವಮೊಗ್ಗ ಮಹಾನಗರಪಾಲಿಕೆ ಸದಸ್ಯ ನಾಗರಾಜ ಕಂಕಾರಿ, ಮಾಜಿ ಉಪಮೇಯರ್ ಫಾಲಾಕ್ಷಿ, ಯುವ ಜೆಡಿಎಸ್ ಪದಾಧಿಕಾರಿಗಳಾದ ಸೂಲಯ್ಯ ಸೇರಿದಂತೆ ಅನೇಕ ಮುಖಂಡರು, ಜೆಡಿಎಸ್ ವಿವಿಧ ಘಟಕಗಳ ಪದಾಧಿಕಾರಿಗಳು ಕಾಂಗ್ರೆಸ್ ಸೇರಿದರು.



### ದಾಖಲೆಯ 517ನೇ ಪ್ರದರ್ಶನ

## ಅ.28ರಂದು ನಗರದಲ್ಲಿ ಶಿವದೂತೆ ಗುಳಿಗೆ ಪ್ರದರ್ಶನ

ಶಿವಮೊಗ್ಗ, ಅ.25: ರಂಗಭೂಮಿಯಲ್ಲಿ ದಾಖಲೆ ಸೃಷ್ಟಿಸಿದ ದೇಶ ವಿದೇಶಗಳಲ್ಲಿ ಮೆಚ್ಚುಗೆ ಪಡೆದ ಕನ್ನಡ ನಾಟಕ ಶಿವದೂತೆ ಗುಳಿಗೆ ಪ್ರದರ್ಶನ ಅ.28ರಂದು ಸಂಜೆ 6.30ಕ್ಕೆ ಕುವೆಂಪು ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಸಂಚಾಲಕ ಜಾದುಗಾರ್ ವಿಕ್ರಮ್ ಶೆಟ್ಟಿ ಹೇಳಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಈ ನಾಟಕವೊಂದು ಅದ್ಭುತ ಹಾಗೂ ವಿಸ್ಮಯವಾಗಿದೆ. ಒಂದು ರೀತಿಯಲ್ಲಿ ಸಿನಿಮಾ ನೋಡಿದ ಹಾಗಾಗುತ್ತದೆ. ದೈವವನ್ನೇ ಮುಖ್ಯವಾಗಿಟ್ಟುಕೊಂಡು ವಿಭಿನ್ನ ಶೈಲಿಯಲ್ಲಿ ಈ ನಾಟಕ ಮೂಡಲಿದೆ. ಈ ಶಿವದೂತ ಗುಳಿಗ ಅಕ್ಟೋಬರ್ 28ರ ರಾತ್ರಿ ಕಾಣಿಸುತ್ತಾನೆ ಎಂದರು.

ಈಗಾಗಲೇ ಭಾರತದ ಅನೇಕ ಜಾಗದಲ್ಲಿ ಕಾಣಿಸಿಕೊಂಡಿರುವ ಈ ಗುಳಿಗ ನಂಬಿದ ಭಕ್ತರ ಉದ್ಧಾರಕ್ಕಾಗಿ ಶಿವಮೊಗ್ಗದ ಕುವೆಂಪು ಹೆಸರಿನ ನೆಲದಲ್ಲಿ ಆಶೀರ್ವಾದ ನೀಡಲು ತಯಾರಾಗಿ ನಿಂತಿದ್ದಾನೆ. ದೈವ ಮತ್ತು ದೇವರನ್ನು ಒಂದೇ ಎಂದು ನಂಬಿದ ನಮಗೆ ಕಣ್ಣಿಗೆ ಕಾಣಿಸಿಕೊಳ್ಳುವ ದೇವರೇ ನಮ್ಮ ಹತ್ತಿರದ ದೈವವಾಗಿದೆ. ಈ ಎಲ್ಲ ದೈವಗಳು ನಮ್ಮ ನಮ್ಮ ಮನೆತನಗಳ ಪೂರ್ವಿಕರೇ ಆಗಿದ್ದು ನಮ್ಮ ಕಷ್ಟ ಪರಂಪರೆಯನ್ನು ತೊಲಗಿಸಲು ಆಗಾಗ ಆಗಮಿಸುತ್ತ ಇರುತ್ತದೆ. ಇಂಥ ಮಹಾನ್ ದೈವಗಳಲ್ಲಿ ಒಂದಾದ ಜಗತ್ತಿನ ಲಯಕರ್ತನಾದ ಶಿವನ ರುಂಡಮಾಲೆಯಲ್ಲಿ ಅಡಗಿದ್ದ ದುಷ್ಟರ ನಾಶ ಮಾಡುವ ಶಿಷ್ಟರ ರಕ್ಷಿಸುವ ಉದ್ದೇಶದಿಂದ ಆಗಾಗ ಭೂಮಿಯಲ್ಲಿ ಅವತರಿಸುತ್ತಾನೆ ಎಂದರು.

ಇದು ನಾಟಕವೇ ಆಗಿದ್ದರೂ ವಿಶಾಲ ಅರ್ಥದಲ್ಲಿ ನಮ್ಮ ಕೆಡುಕುಗಳನ್ನು ನಾಶಮಾಡಿ ನಮ್ಮ ಅಂತಃಶಕ್ತಿ ಬಡಿದೆಬ್ಬಿಸಿ ಒಳಿತನ್ನು ಉಂಟು ಮಾಡುವ ಶಕ್ತಿ ಈ ನಾಟಕಕ್ಕಿದೆ. ನಾಗ ಮಂಡಲ ಡಕ್ಕೆಬಲಿ ಭೂತಕೋಲದ ಉದ್ದೇಶ ಹೇಗಿದೆಯೋ ಅದೇ ಉದ್ದೇಶ ಈ ನಾಟಕಕ್ಕೂ ಇದೆ.

ಪೌರಾಣಿಕ ಅದ್ಧೂರಿ ದೃಶ್ಯ ಸಂಯೋಜನೆ ಹೊಂದಿರುವಂತಹ ಆಚಾರ, ವಿಚಾರ, ಸಂಸ್ಕೃತಿಗೆ ಸಂಬಂಧಿಸಿದ, ಜನರು ಆರಾಧಿಸುವ ದೈವಗಳ ಕಥಾನಕವನ್ನು ನಾಟಕವನ್ನಾಗಿ ರೂಪಿಸಲಾಗಿದೆ ಎಂದರು.

ರಂಗಪ್ರೇಮಿ ಕೆ.ಜಿ. ವೆಂಕಟೇಶ್ ಮಾತನಾಡಿ, ಪ್ರಮುಖ ನಿರ್ದೇಶಕರಲ್ಲೊಬ್ಬರಾಗಿರುವ ವಿಜಯಕುಮಾರ್ ಕೊಡಿಯಾಲ್‌ಬೈಲ್ ಅವರು "ಶಿವದೂತ ಗುಳಿಗ' ನಾಟಕದ ನಿರ್ದೇಶನ ಮಾಡಿದ್ದಾರೆ. ಎ.ಕೆ. ವಿಜಯ್ ಸಂಗೀತ ನೀಡಿದ್ದಾರೆ. ಇದು ಗೌರವ ಪ್ರವೇಶವಾಗಿದ್ದು, ಟಿಕೆಟ್ ಬೆಲೆ 500 ಮತ್ತು 1000ರೂ. ಇರುತ್ತದೆ. ಟಿಕೆಟ್ ಮತ್ತು ವಿವರಗಳಿಗೆ ಮೊ: 9448108222 ಮತ್ತು 8073579575ರಲ್ಲಿ ಸಂಪರ್ಕಿಸಬಹುದಾಗಿದೆ.

ಮಂಗಳೂರಿನ ಪುರಭವನದಲ್ಲಿ ಆರಂಭವಾದ ಶಿವದೂತ ಗುಳಿಗ ನಾಟಕದ ಮೊದಲ ಹೆಜ್ಜೆಯಿಂದ ಹಿಡಿದು 517ನೇ ಪ್ರದರ್ಶನವಾಗಿದೆ ಮತ್ತು 1000ದ ಪ್ರದರ್ಶನಕ್ಕೆ ಮುನ್ನುಗ್ಗುತಿದೆ. 37 ಕಲಾವಿದರು ಇದರಲ್ಲಿ ನಟಿಸುತ್ತಿದ್ದಾರೆ. ಪ್ರಥಮ ಪ್ರದರ್ಶನದಿಂದಲೇ ಈ ನಾಟಕ ಜನರನ್ನು ತನ್ನತ್ತ ಸೆಳೆಯುತ್ತಿದೆ ಎಂದರು.

ಕಲಾ ಸಂಗಮ ತಂಡದ ಕಲಾವಿದರು ನಾಟಕದ ದೃಶ್ಯಾವಳಿಗಳಿಗೆ ಜೀವ ತುಂಬಿದ್ದಾರೆ. ಪರಮಾನಂದ ವಿ. ಸಾಲ್ಯಾನ್ ಅವರ ಸಂಭಾಷಣೆ ಗುರುದೇವ ಆರ್ಟ್ಸ್ ಬಂಟ್ವಾಳ, ಶರತ್ ಪೂಜಾರಿ ಮಾಲೆಮಾರ್ ವಸ್ತ್ರ ವಿನ್ಯಾಸ, ಹರೀಶ್ ಆಚಾರ್ಯ, ಚಂದ್ರಶೇಖರ ಶಿರ್ವ ಮಟ್ಟಾರ್ ರಂಗವಿನ್ಯಾಸ ಮಾಡಿದ್ದಾರೆ.

ಯಕ್ಷಧ್ರುವ ಪಟ್ಲ ಸತೀಶ್ ಶೆಟ್ಟಿ, ತೆಲಿಕದ ಬೊಳ್ಳಿ ದೇವದಾಸ್ ಕಾಪಿಕಾಡ್, ಡಾ| ವೈಷ್ಣವಿ, ರವೀಂದ್ರ ಪ್ರಭು, ನರಸಿಂಹ ಕಿಣಿ, ವಿಶಾಲ್ ರಾಜ್ ಕೋಕಿಲ ಇವರ ಹಿನ್ನೆಲೆ ಸಂಗೀತವಿದ್ದು ಎ.ಕೆ. ವಿಜಯ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಗುಳಿಗನ ಪಾತ್ರವನ್ನು ಕಾಂತಾರದ ಗುರುವ ಪಾತ್ರಧಾರಿ ಸ್ವರಾಜ್ ಶೆಟ್ಟಿ ಮಾಡಿದ್ದಾರೆ. ನಿತೇಶ್ ಕಿನ್ನಿಗೋಳಿ, ವಿನೋದ್ ರಾಜ್ ಕೋಕಿಲ, ರಮೇಶ್ ಕಲ್ಲಡ್ಕ, ಕೀತ್ ಪುರ್ತಾಡೋ, ಧನು ಕುಲಾಲ್ ಬೊಳಂತೂರು, ಜಯರಾಮ ಅಚಾರ್ಯ ಮಂಜೇಶ್ವರ, ರಜತ್ ಕದ್ರಿ, ಶರಣ್ ಶೆಟ್ಟಿ ವೇಣೂರು, ಸಾಗರ ಮಡಂತ್ಯಾರ್, ರಕ್ಷಿತ ರಾವ್, ಕಾಜಲ್ ಬಂಗೇರ ನಾಟಕದಲ್ಲಿ ಅಭಿನಯಿಸಿದ್ದಾರೆ ಎಂದು ವಿವರಿಸಿದರು.

## ಮಹಾ ನಗರಪಾಲಿಕೆ ದಸರಾ ಸಂಪನ್ನ

ಶಿವಮೊಗ್ಗ, ಅ.25: ಲಕ್ಷಾಂತರ ಜನರ ಹರ್ಷೋದ್ಗಾರಗಳ ನಡುವೆ ತಹಶೀಲ್ದಾರ್ ಎನ್.ಜೆ. ನಾಗರಾಜ್ ಅಂಬು ಕಡಿಯುವುದರೊಂದಿಗೆ ರಾವಣದಹನದ ನಡುವೆ ಬಾಣ ಬಿರುಸುಗಳ ಕಣ್ಣು ಕೋರೈಸುವ ಬೆಳಕಿನ ಹೊಳಪಿನೊಂದಿಗೆ 10 ದಿನದ ದಸರಾ ಸಂಪನ್ನಗೊಂಡಿತು.

ಇಡೀ ಫ್ರೀಡಂ ಪಾರ್ಕ್ ಜನರಿಂದ ತುಂಬಿಹೋಗಿತ್ತು. ದೇವಾನುದೇವತೆಗಳು ಮೆರವಣಿಗೆಯಲ್ಲಿ ಫ್ರೀಡಂ ಪಾರ್ಕ್ ತಲುಪುವ ಮುನ್ನವೇ ಕುಟುಂಬಸಮೇತವಾಗಿ ಸಾವಿರಾರು ಜನರು ನೆರೆದಿದ್ದರು.

ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಅರ್ಚಕರಾದ ರಾಮಪ್ರಸಾದ್ ಮೊದಲಾದವರಿಂದ ಮಂತ್ರಘೋಷಗಳನ್ನ ಹಾಡಲಾಯಿತು. ಬನ್ನಿ ಕಡಿಯುವುದರಿಂದ 9 ದಿನಗಳ ದಸರಾ ಹಬ್ಬ ಸಂಪನ್ನಗೊಂಡಿದೆ. ನಂತರ 10 ತಲೆಯ ರಾವಣನನ್ನ ಸುಡಲಾಯಿತು.

ಫ್ರೀಡಂ ಪಾರ್ಕ್‌ನಲ್ಲಿ ಸಾರ್ವಜನಿಕರು ಸಂಗೀತ ಆಲಿಸುತ್ತಾ, ವಿವಿಧ ಬಗೆಯ ತಿನಿಸುಗಳನ್ನು ಸವಿಯುತ್ತಾ ಹಲವು ವಸ್ತುಗಳನ್ನು ಖರೀದಿಸುತ್ತಾ ಸಂಭ್ರಮದಲ್ಲಿ ಮಿಂದರು. ಯುವಕ ಯುವತಿಯರು ಸೆಲ್ಫಿ ಮತ್ತು ವೀಡಿಯೋ ಮಾಡುವ ದೃಶ್ಯ ಸಾಮಾನ್ಯವಾಗಿತ್ತು. ಡ್ರೋಣ್‌ಗಳು ಫೋಟೋ ಕ್ಲಿಕ್ಕಿಸಲು ಆಕಾಶದಲ್ಲಿ ಸಂಚರಿಸಿದ್ದು, ನಕ್ಷತ್ರಗಳಂತೆ ಗೋಚರಿಸಿದವು. ಹಲವರು ಮೊಬೈಲ್ ಹಾಗೂ ಹೆಲ್ಮೆಟ್‌ಗಳನ್ನು ಕಳೆದುಕೊಂಡರು.

ಪಕ್ಷಭೇದವಿಲ್ಲದೆ ರಾಜಕಾರಣಿಗಳು ಬನ್ನಿ ಮುಡಿಯುವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಾಜಿ ಡಿಸಿಎಂ ಈಶ್ವರಪ್ಪ, ಸಂಸದ ರಾಘವೇಂದ್ರ, ಪಾಲಿಕೆ ಮೇಯರ್ ಶಿವಕುಮಾರ್, ಉಪಮೇಯರ್ ಲಕ್ಷ್ಮೀ ಶಂಕರ್, ಪಾಲಿಕೆ ಸದಸದಯೆಯರು ಭಾಗವಹಿಸಿದ್ದರು. ಈಶ್ವರಪ್ಪ ಮತ್ತು ಸಂಸದರ ರಾಘವೇಜದ್ರ ಇಬ್ಬರೂ ಕೈ ಹಿಡಿದು ಜನರಿಗೆ ಶುಭಕೋರಿರುವುದು ದಸರಾ ಹಬ್ಬದ ವಿಶೇಷವಾಗಿತ್ತು.

ಬರಗಾಲ, ಗಣೇಶ ಹಬ್ಬ, ಈದ್ ಮಿಲಾದ್ ಗಲಾಟೆ, ರಾಜಕಾರಣಿಗಳ ಅಬ್ಬರ, ಮಾತಿನ ಸಂಘರ್ಷ ಹಲವು ತಲ್ಲಣಗಳ ನಡುವೆ ದಸರಾ ಹಬ್ಬಕ್ಕೆ ಸಿಹಿ ತೆರೆ ಬಿದ್ದಿತು.

## ವಿವಿಧ ಅಧಿಕಾರಿ-ಸಿಬ್ಬಂಧಿ ಹುದ್ದೆಗಳ ನೇಮಕಾತಿಗೆ ಅ.28-29ರಂದು ಪರೀಕ್ಷೆ

ಶಿವಮೊಗ್ಗ, ಅ.25: ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ, ಆಹಾರ ಮತ್ತು ನಾಗರಿಕ ಸರಬರಾಜು ನಿಗಮ, ಕರ್ನಾಟಕ ಕಟ್ಟಡ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿ., ಹಾಗೂ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಅಧಿಕಾರಿ-ಸಿಬ್ಬಂಧಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 28 ಮತ್ತು 29ರಂದು ರಾಜ್ಯದಾದ್ಯಂತ ಪರೀಕ್ಷೆಗಳನ್ನು ನಡೆಸಿ, ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಿದೆ.

ಶಿವಮೊಗ್ಗ ಜಿಲ್ಲೆಯ 3 ತಾಲೂಕುಗಳ ಒಟ್ಟು 35ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿರುವ ಪರೀಕ್ಷೆಯು ಯಾವುದೇ ಅಡ್ಡಿ ಆತಂಕಗಳಿಲ್ಲದೆ ಹಾಗೂ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಲು ಜಿಲ್ಲಾಡಳಿತ ಅಗತ್ಯ ಮುಂಗಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಡಾ|| ಆರ್.ಸೆಲ್ವಮಣಿ ಅವರು ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಹಳೇ ಕಚೇರಿ ಕಟ್ಟಡದಲ್ಲಿ ಪರೀಕ್ಷೆಗೆ ನಿಯೋಜಿತರಾಗಿದ್ದ ಅಧಿಕಾರಿ-ಸಿಬ್ಬಂಧಿಗಳು ಹಾಗೂ ಮೇಲ್ವಿಚಾರಕರಿಗಾಗಿ ಏರ್ಪಡಿಸಲಾಗಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಅಕ್ಟೋಬರ್ 28ರಂದು ನಗರದ 20ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಬೆಳಿಗ್ಗೆ 10.30ರಿಂದ ನಡೆಯುವ ಅಧಿವೇಶನದಲ್ಲಿ 6945 ಪರೀಕ್ಷಾರ್ಥಿಗಳು ಹಾಗೂ ಮಧ್ಯಾಹ್ನ 2.30ರಿಂದ ನಡೆಯುವ 2ನೇ ಅಧಿವೇಶನದಲ್ಲಿ 7,000 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅಕ್ಟೋಬರ್ 29ರಂದು ಶಿವಮೊಗ್ಗದ 24, ಭದ್ರಾವತಿ-06, ಸಾಗರ-02 ಮತ್ತು ಶಿಕಾರಿಪುರ-03 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುತ್ತಿದ್ದು, ಅಂದು ಮೊದಲ ಅಧಿವೇಶನದಲ್ಲಿ 12,616 ಪರೀಕ್ಷಾರ್ಥಿಗಳು ಹಾಗೂ ಮಧ್ಯಾಹ್ನದ 2ನೇ ಅಧಿವೇಶನದಲ್ಲಿ 12,534 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದರು.

ನಡೆಯುವ ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಲು ಪೊಲೀಸ್ ಇಲಾಖೆಯ ಸಹಯೋಗ ಪಡೆದುಕೊಳ್ಳಲಾಗುವುದು. ಪ್ರತಿ ಕೇಂದ್ರಕ್ಕೆ ವೀಕ್ಷಕರಾಗಿ ಎ ಶ್ರೇಣಿಯ ಅಧಿಕಾರಿಯನ್ನು, ಪ್ರಶ್ನೆ ಪತ್ರಿಕಾ ಪಾಲಕರನ್ನಾಗಿ ಓರ್ವ ಪ್ರಾಂಶುಪಾಲರನ್ನು ಹಾಗೂ ಓರ್ವ ಉಪನ್ಯಾಸಕರನ್ನು ಜಾಗೃತದಳದ ಸದಸ್ಯರನ್ನಾಗಿ ನೇಮಿಸಲಾಗಿದೆ. ಅಲ್ಲದೇ ಎಲ್ಲಾ ಪರೀಕ್ಷಾ ಕೇಂದ್ರಗಳ ಸೂಕ್ತ ನಿರ್ವಹಣೆಗಾಗಿ 10 ತ್ರಿಸದಸ್ಯ ಸಮಿತಿಗಳನ್ನು ರಚಿಸಿ ಹೊಣೆಗಾರಿಕೆ ನೀಡಲಾಗಿದೆ. ಪರೀಕ್ಷೆ ನಡೆಯುವ ದಿನದಂದು ವಿದ್ಯುತ್ ಅಡಚಣೆಯಾಗದಂತೆ ಗಮನಿಸಲಾಗುವುದು ಅಲ್ಲದೇ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200ಮೀ. ಪ್ರದೇಶದ ವ್ಯಾಪ್ತಿಯಲ್ಲಿ ಸೆ.144ಜಾರಿಗೊಳಿಸಿ ಆದೇಶ ಹೊರಡಿಸಲಾಗಿದೆ ಎಂದರು.

ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ನಿಗಧಿಪಡಿಸಿದ ಅವಧಿಗೂ ಒಂದು ಗಂಟೆಗಳ ಮುನ್ನ ಪರೀಕ್ಷಾ ಕೇಂದ್ರದಲ್ಲಿದ್ದು, ನಿಯಮಾನುಸಾರ ಪ್ರವೇಶ ಪಡೆಯಬೇಕು. ಹಿಜಾಬ್ ಧರಿಸಿದ ಪರೀಕ್ಷಾರ್ಥಿಗಳು ಸಕಾಲದಲ್ಲಿ ಹಾಜರಿದ್ದು, ತಪಾಸಣೆಗೆ ಒಳಗಾಗಬೇಕು. ಅದಕ್ಕಾಗಿ ಪ್ರತ್ಯೇಕ ಮಹಿಳಾ ಸಿಬ್ಬಂಧಿಗಳನ್ನು ನಿಯೋಜಿಸಲಾಗುವುದು. ನಿಗಧಿತ ಅವಧಿಯ ನಂತರ ಆಗಮಿಸುವ ಪರೀಕ್ಷಾರ್ಥಿಗಳಿಗೆ ಕೇಂದ್ರದ ಪ್ರವೇಶ ನಿರ್ಬಂಧಿಸಲಾಗಿದೆ. ಪರೀಕ್ಷೆಗೆ ಆಗಮಿಸುವ ಪ್ರತಿ ವಿದ್ಯಾರ್ಥಿಗಳು ಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಕೇಂದ್ರದೊಳಕ್ಕೆ ತರುವುದನ್ನು, ಪೂರ್ಣ ತೋಳಿನ ಷರ್ಟ್ ಧರಿಸುವುದನ್ನು, ಶೂ ಹಾಗೂ ಆಭರಣಗಳು ಧರಿಸುವುದನ್ನು ಕಡ್ಡಾಯವಾಗಿ ನಿಷೇದಿಸಲಾಗಿದೆ. ಪರೀಕ್ಷಾರ್ಥಿಗಳು ಪರೀಕ್ಷಾ ಪ್ರಾಧಿಕಾರದ ಈ ಎಲ್ಲಾ ನಿಯಮಗಳನ್ನು ಕಡ್ಡಾಯವಾಗಿ ಅನುಸರಿಸಬೇಕು. ತಪ್ಪಿದಲ್ಲಿ ಕಠಿಣ ಕಾನೂನು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಪರೀಕ್ಷಾರ್ಥಿಗಳಲ್ಲದೆ ಇತರೆ ವ್ಯಕ್ತಿಗಳು ಪ್ರವೇಶಿಸುವುದನ್ನು, ಗುಂಪುಗೂಡುವುದನ್ನು ನಿಷೇಧಿಸಲಾಗಿದೆ ಎಂದವರು ತಿಳಿಸಿದ್ದಾರೆ.

ಪರೀಕ್ಷಾರ್ಥಿಗಳಿಗೆ ಅನುಕೂಲವಾಗುವಂತೆ ಕೇಂದ್ರದ ಮೇಲ್ವಿಚಾರಕರು, ವಿದ್ಯುತ್, ಶುದ್ಧಗಾಳಿ-ಬೆಳಕು, ಕುಡಿಯುವ ನೀರು, ಶೌಚಾಲಯ, ಪ್ರತಿ ಕೊಠಡಿಗೆ ಗೋಡೆಗಡಿಯಾರ ಸೌಲಭ್ಯ ಹಾಗೂ ಕಣ್ಗಾವಲಿಗಾಗಿ ಕ್ಯಾಮರಾಗಳನ್ನು ಅಳವಡಿಸಲು ಸೂಚಿಸಲಾಗಿದೆ ಎಂದು ತಿಳಿಸಿರುವ ಅವರು, ಪರೀಕ್ಷಾ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಯಾವುದೇ ನಿರ್ಲಕ್ಷ್ಯ ತೋರದೇ ತಮ್ಮ ಜವಾಬ್ದಾರಿಯರಿತು ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದ್ದಾರೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ಧಲಿಂಗರೆಡ್ಡಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೃಷ್ಣಪ್ಪ, ಜಿಲ್ಲಾ ಖಜಾನಾಧಿಕಾರಿ ಶ್ರೀಮತಿ ಹೆಚ್.ಎಸ್.ಸಾವಿತ್ರಿ ಸೇರಿದಂತೆ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ನಿಯೋಜಿತ ಅಧಿಕಾರಿ-ಸಿಬ್ಬಂಧಿಗಳು ಉಪಸ್ಥಿತರಿದ್ದರು.

## ಬಿವೈಆರ್ ವಾಟ್ಸಪ್ ಚಾನಲ್ ಲೋಕಾರ್ಪಣೆ

ಶಿವಮೊಗ್ಗ, ಅ.25: ಸಂಸದ ಬಿ.ವೈ.ರಾಘವೇಂದ್ರ ಅವರ ಅಧಿಕೃತ ವಾಟ್ಸಪ್ ಚಾನೆಲ್ ಲೋಕಾರ್ಪಣೆ ಮಾಡಲಾಯಿತು. ನಗರದ ರಾಯಲ್ ಆರ್ಕಿಡ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವಾಟ್ಸಪ್ ಚಾನೆಲ್‌ಗೆ ಚಾಲನೆ ನೀಡಲಾಯಿತು. ಈ ವೇಳೆ ಮಾತನಾಡಿದ ಅವರು, ಡಿಜಿಟಲ್ ವಿಶ್ವವಿದ್ಯಾಲಯ, ಡಿಜಿಟಲೀಕರಣದ ಸಾಮಾಜಿಕ ಮಾಧ್ಯಮಗಳಲ್ಲಿ ಜನ ಸಂಪರ್ಕ ಮಾಡಲು ಈ ವಾಟ್ಸಪ್ ಚಾನೆಲ್ ಅನುಕೂಲವಾಗಲಿದೆ. ಪ್ರಧಾನಿಗಳು ಸಹ ವಾಟ್ಸಪ್ ಚಾನೆಲ್‌ನ್ನ ಅಧಿಕೃತ ಚಾನೆಲ್ ಆರಂಭಿಸಿದ್ದಾರೆ. ಮೂಲ ಉದ್ದೇಶ, ಸಾರ್ವಜನಿಕರು ಸ್ಪಂಧನೆಗೆ ಈ ಚಾನೆಲ್ ಅನುಕೂಲವಾಗಲಿದೆ. ಸಾರ್ವಜನಿಕರು ಈ ವಾಟ್ಸಾಪ್ ಮೂಲಕ ತಮ್ಮ ಸಮಸ್ಯೆಗಳನ್ನು, ಸಲಹೆಗಳನ್ನು ನೀಡಬಹುದು ಎಂದರು.

ಕಿಮ್ಮನೆ ಜಯರಾಮ್, ಎಂಎಲ್‌ಸಿ ರುದ್ರೇಗೌಡ, ಬಿಜೆಪಿ ನಗರಾಧ್ಯಕ್ಷ ಜಗದೀಶ್, ಮೇಯರ್ ಶಿವುಕುಮಾರ್ ಹಾಜರಿದ್ದರು.

## ಶರಣ್ಯ ಕಾರ್ಯ ಶ್ಲಾಘನೀಯ: ಡಿಸಿ



ಶಿವಮೊಗ್ಗ, ಅ.25: ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವ ರೋಗಿಗಳ ಸೇವೆ ಮಾಡುವ ಜತೆಯಲ್ಲಿ ಅಗತ್ಯ ಸೌಕರ್ಯಗಳನ್ನು ಒದಗಿಸುತ್ತಿರುವ ಶರಣ್ಯ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ಜಿಲ್ಲಾಧಿಕಾರಿ ಡಾ. ಆರ್.ಸೆಲ್ವಮಣಿ ಹೇಳಿದರು.

ಶಿವಮೊಗ್ಗ ತಾಲೂಕಿನ ಗಾಜನೂರು ಅಗ್ರಹಾರದಲ್ಲಿರುವ ಡಿಎಸ್‌ಎಲ್ ಟ್ರಸ್ಟ್ ನ ಶರಣ್ಯ ಆರೈಕೆ ಕೇಂದ್ರ ವತಿಯಿಂದ ಆಯೋಜಿಸಿದ್ದ ಶ್ರೀ ಮಾತೆ ಚೌಡೇಶ್ವರಿ ಮತ್ತು ಶ್ರೀ ಭೂತೇಶ್ವರ ದೇವರುಗಳ ನವೀಕೃತ ದೇಗುಲದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಮಾನವೀಯ ನೆಲೆಯಲ್ಲಿ ಶರಣ್ಯ ಸಂಸ್ಥೆಯು ವಿಶೇಷ ಕಾರ್ಯ ನಡೆಸುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತಿದೆ ಎಂದು ತಿಳಿಸಿದರು.

ಶಿವಮೊಗ್ಗ ಜಿಲ್ಲಾ ಪೊಲೀಸ್ ರಕ್ಷಣಾಧಿಕಾರಿ ಜಿ.ಕೆ.ಮಿಥುನ್‌ಕುಮಾರ್ ಮಾತನಾಡಿ, ಶರಣ್ಯ ಸಂಸ್ಥೆಯು ಸಮಾಜಮುಖಿಯಾಗಿ ಕೆಲಸ ಮಾಡುತ್ತಿದ್ದು, ರೋಗಿಗಳ ಆರೈಕೆಯಲ್ಲಿ ವಿಶೇಷ ಕಾಳಜಿ ವಹಿಸುತ್ತಿದೆ. ರೋಗಿಗಳ ಕಷ್ಟದ ದಿನಗಳಲ್ಲಿ ಅವರಿಗೆ ಉಚಿತ ಸೇವೆ ಮಾಡುತ್ತಿರುವುದು ಅಭಿನಂದನೀಯ ಕಾರ್ಯ ಎಂದು ತಿಳಿಸಿದರು.

ಶರಣ್ಯ ಆರೈಕೆ ಕೇಂದ್ರದ ಆವರಣದಲ್ಲಿ ಇರುವ ಶ್ರೀ ಮಾತೆ ಚೌಡೇಶ್ವರಿ ಮತ್ತು ಶ್ರೀ ಭೂತೇಶ್ವರ ದೇವರುಗಳ ನವೀಕೃತ ದೇಗುಲದ ಲೋಕಾರ್ಪಣೆ ಸಂದರ್ಭದ ಪ್ರಯುಕ್ತ ದುರ್ಗಾ ಹೋಮ ನಡೆಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ಆರ್.ಸೆಲ್ವಮಣಿ, ಎಸ್‌ಪಿ ಜಿ.ಕೆ. ಮಿಥುನ್ ಕುಮಾರ್ ವಾರ್ಡ್‌ಗಳಿಗೆ ಭೇಟಿ ನೀಡಿ ವೀಕ್ಷಿಸಿದರು. ವಿಡಿಯೋ ಮುಖಾಂತರ ಸಂಸ್ಥೆಯ ವಿವರ ವೀಕ್ಷಿಸಿದರು. ಎರಡು ಬಿಲ್ವಪತ್ರೆಯ ಗಿಡಗಳನ್ನು ಆವರಣದಲ್ಲಿ ನೆಡಲಾಯಿತು.

ರೋಗಿಗಳು ಗುಣಪಡಿಸಲಾಗದೇ ಇರುವ ಉಲ್ಬಣ ಸ್ಥಿತಿಯಲ್ಲಿ ಬಂದವರಿಗೂ ಉತ್ತಮ ಶುಶ್ರೂಷೆಯ ನಂತರದಲ್ಲಿ ಗುಣಮುಖರಾದ ಅನೇಕ ಉದಾಹರಣೆ ಶರಣ್ಯ ಸಂಸ್ಥೆಯಿಂದ ಆಗಿದೆ.

ಶರಣ್ಯ ಸಂಸ್ಥೆಯ ಗೌರವಾಧ್ಯಕ್ಷ, ವಿಧಾನ ಪರಿಷತ್ ಮಾಜಿ ಸಭಾಪತಿ ಡಿ.ಎಚ್. ಶಂಕರಮೂರ್ತಿ, ವಿಧಾನ ಪರಿಷತ್ ಸದಸ್ಯ ಡಿ.ಎಸ್.ಅರುಣ್, ಶರಣ್ಯ ಸಂಸ್ಥೆ ಅಧ್ಯಕ್ಷ ಟಿ.ಆರ್.ಅಶ್ವತ್ಥ್ ನಾರಾಯಣ ಶೆಟ್ಟಿ, ಮ್ಯಾನೇಜಿಂಗ್ ಟ್ರಸ್ಟಿ ಡಿ.ಎಲ್. ಮಂಜುನಾಥ್, ಸಹ ಕಾರ್ಯದರ್ಶಿ ಬಿ.ಎನ್.ಮಂಜುನಾಥ್, ಸಂದೀಪ್, ಶ್ವೇತಾ ಮತ್ತಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸಮಾಜಮುಖಿಯಾಗಿರಬೇಕು



ಶಿವಮೊಗ್ಗ, ಅ.25: ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳು ಸಮಾಜಮುಖಿ ಸೇವಾ ಮನೋಭಾವ ಬೆಳೆಸಿಕೊಂಡು ದೇಶದ ಸದೃಢ ಬೆಳವಣಿಗೆಯಲ್ಲಿ ಮಹತ್ತರ ಪಾತ್ರ ವಹಿಸಬೇಕು ಎಂದು ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಪಿ ನಾಗರಾಜ್ ಹೇಳಿದರು.

ಶಿವಮೊಗ್ಗ ಜಿಲ್ಲಾ ಸ್ಕೌಟ್ ಭವನದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಶಿವಮೊಗ್ಗ ಜಿಲ್ಲಾ ಮತ್ತು ಸ್ಥಳೀಯ ಸಂಸ್ಥೆ ಹಾಗೂ ಮಲ್ನಾಡ್ ಓಪನ್ ಗ್ರೂಪ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಂಬೂರೀ ಆನ್ ದಿ ಏರ್ ( ಜೋಟ) ಮತ್ತು ಜಂಬೂರೀ ಆನ್ ದಿ ಇಂಟರ್ನೆಟ್ (ಜೋಟಿ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ನಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳುವಂತೆ ಪೋಷಕರು ಹಾಗೂ ಶಿಕ್ಷಕರು ಪ್ರೇರೆಪಿಸಬೇಕು. ಉತ್ತಮ ವ್ಯಕ್ತಿತ್ವ, ನಾಯಕತ್ವ ಗುಣ ಸೇರಿದಂತೆ ಸಮಾಜದ ಪ್ರಗತಿಗೆ ಕಾರಣ ಆಗುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆಯುಕ್ತ (ಸ್ಕೌಟ್) ಕೆ.ಪಿ. ಬಿಂದು ಕುಮಾರ್ ಮಾತನಾಡಿ, ಸಂವಹನ ಕ್ಷೇತ್ರದಲ್ಲಿ ತಾಂತ್ರಿಕ ಪರಿಣಿತಿ, ಇತರ ಹ್ಯಾಮ್ ರೇಡಿಯೋ ಆಪರೇಟರ್ಸ್ ಗಳೊಂದಿಗೆ ಚರ್ಚೆ, ಆಂಟೆನ್ನಾ ಅಭಿವೃದ್ಧಿ, ಉಪಗ್ರಹದ ಮೂಲಕ ಸಂವಹನ, ವಿಕೋಪಗಳಲ್ಲಿ ಸೇವೆ ಮುಂತಾದ ಉತ್ತಮ ಅಂಶ ಒಳಗೊಂಡ ಹ್ಯಾಮ್ ರೇಡಿಯೋದ ಸದಸ್ಯರಾಗಬೇಕು ಎಂದು ಹೇಳಿದರು.

ಅಂತರ ರಾಷ್ಟ್ರೀಯ ಸ್ಕೌಟ್ ಗೈಡ್ ಸಂಸ್ಥೆ 60 ವರ್ಷಕ್ಕೂ ಮೇಲ್ಪಟ್ಟು ಆಚರಿಸುತ್ತಿರುವ ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ದೇಶದ ಇತರ ಜಾಗದಲ್ಲಿ ಹಾಗೂ ವಿದೇಶದ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳೊಂದಿಗೆ ಉತ್ತಮ ಸಂವಹನ ಮಾಡಬೇಕು ಎಂದು ತಿಳಿಸಿದರು.

ಹ್ಯಾಮ್ ರೇಡಿಯೋ ಆಪರೇಟರ್ ಹಾಗೂ ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ರಾಜೇಶ್ ವಿ ಅವಲಕ್ಕಿ ಪ್ರಾಸ್ತಾವಿಕ ಮಾತನಾಡಿ, ಹ್ಯಾಮ್ ರೇಡಿಯೋದ ಬಗ್ಗೆ, ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಜೋಟ ಮತ್ತು ಜೋಟಿ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಮುಖ್ಯ ಆಯುಕ್ತ ಹೆಚ್ ಡಿ ರಮೇಶ್ ಶಾಸ್ತ್ರೀ ಬ್ರೆಜಿಲ್ ದೇಶದ ಮಕ್ಕಳೊಂದಿಗೆ ಸಂಪರ್ಕಿಸಿ ಮಾತನಾಡಿದರು. ಹಾಜರಿದ್ದ ಎಲ್ಲಾ ಸದಸ್ಯರಿಗೆ ಶುಭಾಶಯಗಳನ್ನು ಕೋರಿದರು. ನಗರದ ಸಹ್ಯಾದ್ರಿ ಕಾಲೇಜು, ಮಲೆನಾಡು ಮುಕ್ತದಳ ಮತ್ತು ಇತರ ಶಾಲೆ ಕಾಲೇಜಿನ ಸ್ಕೌಟ್ ಗೈಡ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಹಾಯಕ ರಾಜ್ಯ ಸಂಘಟನಾ ಆಯುಕ್ತೆ ಭಾರತಿ ಡಯಾಸ್ ಸ್ವಾಗತಿಸಿ ನಿರೂಪಿಸಿದರು. ಸಹಾಯಕ ಜಿಲ್ಲಾ ಆಯುಕ್ತ ಶ್ರೀನಿವಾಸ್ ವರ್ಮಾ ವಂದಿಸಿದರು. ಹ್ಯಾಮ್ ಆಪರೇಟರ್ ಮತ್ತು ಸ್ಥಳೀಯ ಸಂಸ್ಥೆಯ ಸಹ ಕಾರ್ಯದರ್ಶಿ ಘನಶ್ಯಾಮ್ ಗಿರಿಮಾಜಿ, ಕೇಂದ್ರ ಸ್ಥಾನಿಕ ಆಯುಕ್ತ ಜಿ.ವಿಜಯ್‌ಕುಮಾರ್, ಮಲ್ಲಿಕಾರ್ಜುನ ಕಾನೂರ್ ಉಪಸ್ಥಿತರಿದ್ದರು.





ಶಿವಮೊಗ್ಗ: ಮಹಾನಗರಪಾಲಿಕೆ ವತಿಯಿಂದ ಆಯೋಜಿಸಲಾಗಿದ್ದ ದಸರಾ ಹಬ್ಬವು ನಿನ್ನೆ ಶಿವಮೊಗ್ಗ ತಾಲ್ಲೂಕು ತಹಸೀಲ್ದಾರ್ ನೇತೃತ್ವದಲ್ಲಿ ಬನ್ನಿ ಮುಡಿಯುವ ಮೂಲಕ ಸಂಪನ್ನಗೊಂಡಿತು.

# ರಾಜ್ಯ ದೇವಾಂಗ ಸಂಘದ ವಿವಿಧ ಘಟಕಗಳಿಗೆ ಆಯ್ಕೆ

ಶಿವಮೊಗ್ಗ , ಅ.25: ಕರ್ನಾಟಕ ರಾಜ್ಯ ದೇವಾಂಗ ಸಂಘದ ವಿವಿಧ ಘಟಕಗಳಿಗೆ ಶಿವಮೊಗ್ಗ ಜಿಲ್ಲೆಯಿಂದ ಈ ಕೆಳಕಂಡವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಸಮಾಜದ ರಾಜ್ಯ ಮುಖಂಡರಾದ ಟಿ. ರಾಜೇಶ್ ಹಾಗೂ ಡಿ.ಟಿ. ವೆಂಕಟೇಶ್ ಅವರು ತಿಳಿಸಿದ್ದಾರೆ.

ಮಹಿಳಾ ಘಟಕಕ್ಕೆ ಟಿ.ಆರ್. ಶೇಷಮ್ಮ , ರೇಖಾ ರವಿಕುಮಾರ್, ಜಯಮ್ಮ ಚಂದ್ರಶೆಟ್ಟಿ , ಬಿ.ಜೆ. ಕಲಾವತಿ, ಯುವಘಟಕಕ್ಕೆ ಡಿ. ಹೇಮಂತಕುಮಾರ್, ಡಿ. ಪ್ರದೀಪ್, ಎಂ. ದರ್ಶನ್, ಹೆಚ್.ಜಿ. ಕಿರಣ್ ಇವರು ಪದಾಧಿಕಾರಿಗಳಾಗಿ ಆಯ್ಕೆಯಾಗಿದ್ದಾರೆ.

ಇಂಜಿನಿಯರ್ಸ್ ಘಟಕಕ್ಕೆ ಎಸ್.ಎನ್. ಚಂದ್ರಶೇಖರ್, ಪ್ರೇಮಾ ವಿಜಯಕುಮಾರ್, ಸಿ.ಜಿ. ಪಾಟೀಲ್, ಡಾಕ್ಟರ್ಸ್ ಘಟಕಕ್ಕೆ ಡಾ। ಎ.ಎಸ್. ದಯಾನಂದ್, ಡಾ। ಎಂ. ರವಿ, ಡಾ। ಡಿ. ಕೃಷ್ಣಮೂರ್ತಿ,ಡಾ। ಈ. ಶ್ರೀಧರ್, ವಕೀಲರ ಘಟಕಕ್ಕೆ ವೇಣುಗೋಪಾಲ್, ಜಿ. ಪರಮೇಶ್ವರಪ್ಪ , ಸುಪ್ರಿಯಾ ಹಾಗೂ ವರ್ತಕರ ಘಟಕಕ್ಕೆ ಎಂ. ಕಾಂತರಾಜ್, ಆರ್. ಮಣಿಕಂಠ, ಬಿ. ಗೋಪಿನಾಥ್ ಇವರು ರಾಜ್ಯಸಮಿತಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.


**ವಿವಿಧ ಕಚೇರಿಗಳಿಗೆ ಬೇಕಾಗಿದ್ದಾರೆ**

- ರಿಸೆಪ್ಷನಿಸ್ಟ್
- ಮಾರ್ಕೆಟಿಂಗ್ ಎಕ್ಸಿಕ್ಯೂಟಿವ್
- ಸೇಲ್ಸ್‌ಗರ್ಲ್ಸ್
- ಎಕೌಂಟೆಂಟ್
- ಕಂಪ್ಯೂಟರ್ ಆಪರೇಟರ್
- ಹೌಸ್‌ಕೀಪಿಂಗ್
- ಟೆಲಿ ಕಾಲರ್ಸ್

ಸಂಪರ್ಕಿಸಿ:

TSTL THE LADDER TO THE SKY

ಶ್ರೀ ದುರ್ಗಾಪರಮೇಶ್ವರೀ ಕಾಂಪ್ಲೆಕ್ಸ್, ಶ್ರೀ ದುರ್ಗಾ ಪರಮೇಶ್ವರೀ ದೇವಸ್ಥಾನ ರಸ್ತೆ, 1ನೇ ತಿರುವು, ದುರ್ಗಿಗುಡಿ, ಶಿವಮೊಗ್ಗ.

**ಖರೀದಿಗೆ ಬೇಕಾಗಿದೆ**

ಅಬ್ಬಲಗೆರೆ ಬಳಿ 30 x 55 ಅಳತೆಯ ನಿವೇಶನ – ಹಂಚಿನ ಮನೆ

ಸಂಪರ್ಕಿಸಿ: 8792026628

**ಖರೀದಿಗೆ ಬೇಕಾಗಿದೆ**

ಕೃಷಿ ನಗರದಲ್ಲಿ ಮನೆ ಅಥವಾ ನಿವೇಶನ ಖರೀದಿಗೆ ಬೇಕಾಗಿದೆ

ಸಂಪರ್ಕಿಸಿ: 8792026628

**ಬಾಡಿಗೆಗೆ ಇದೆ**

ಎಸ್‌ಪಿಎಂ ರಸ್ತೆ ಕೊಲ್ಲೂರಯ್ಯ ಬೀದಿಯಲ್ಲಿ ಮೊದಲನೇ ಮಹಡಿ ಮನೆ

ಸಂಪರ್ಕಿಸಿ: 8792026628

**ಬಾಡಿಗೆಗೆ ಇದೆ**

ವಿನೋಬನಗರ ಬೊಮ್ಮನಕಟ್ಟೆ ರೈಲ್ವೇ ಗೇಟ್ ಬಳಿ 2ಬಿಹೆಚ್‌ಕೆ ಮನೆ ಬಾಡಿಗೆಗಿದೆ.

ಸಂಪರ್ಕಿಸಿ: 8792026628








Printed, Published and Owned by S. Balakrishna Bhat, at Published at Munnurahalli Compound, B.B. Street, Shivamogga, Editor: S. Balakrishna Bhat, Shivamogga. **OFFICE ADDRESS: SRI DURGAPARAMESHWARI TEMPLE BUILDING, 1ST CROSS, DURGIGUDI, SHIVAMOGGA. MOB: 8792128878. EMAIL: KRISHNABANARI72@GMAIL.COM**